Akashvani: Bangalore
National Bulletins In Kannada
24.05.2025 : 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
24.05.2025 : 7.35AM
******

ಮುಖ್ಯಾಂಶಗಳು

1. ನವದೆಹಲಿಯಲ್ಲಿಂದು ನೀತಿ ಆಯೋಗದ ಹತ್ತನೇ ಆಡಳಿತ ಮಂಡಳಿಯ ಸಭೆಯ ಅಧ್ಯಕ್ಷತೆ ವಹಿಸಲಿರುವ ಪ್ರಧಾನಿ ನರೇಂದ್ರ ಮೋದಿ
2. ಕೇಂದ್ರ ಸರ್ಕಾರಕ್ಕೆ ಪ್ರಸಕ್ತ ಹಣಕಾಸು ವರ್ಷಕ್ಕೆ ೨.೬೯ ಲಕ್ಷ ಕೋಟಿ ರೂಪಾಯಿಗಳ ಲಾಭಾಂಶ ನೀಡಿದ ಆರ್‌ಬಿಐ
3. ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳಲ್ಲಿ ಆರು ತಿಂಗಳೊಳಗೆ ಕೇಡರ್ ಪರಿಶೀಲನೆ ನಡೆಸುವಂತೆ ಸುಪ್ರೀಂಕೋರ್ಟ್ ನಿರ್ದೇಶನ
4. ಪೋಲೆಂಡ್‌ನಲ್ಲಿ ನಡೆದ ೨೦೨೫ರ ಜಾವೆಲಿನ್ ಎಸೆತದಲ್ಲಿ ನೀರಜ್ ಚೋಪ್ರಾಗೆ ಬೆಳ್ಳಿ ಪದಕ
5. ಐಪಿಎಲ್ ಟಿ-೨೦ ಕ್ರಿಕೆಟ್; ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಸನ್‌ರೈಸರ್ಸ್ ಹೈದರಾಬಾದ್‌ಗೆ ೪೨ ರನ್‌ಗಳ ಜಯ

*************

ಪ್ರಧಾನಮಂತ್ರಿ ನರೇಂದ್ರ ಮೋದಿ ನವದೆಹಲಿಯಲ್ಲಿಂದು ನಡೆಯಲಿರುವ ನೀತಿ ಆಯೋಗದ ಹತ್ತನೇ ಆಡಳಿತ ಮಂಡಳಿ ಸಭೆಯ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. "೨೦೪೭ರ ವೇಳೆಗೆ ವಿಕಸಿತ ರಾಜ್ಯಕ್ಕಾಗಿ ವಿಕಸಿತ ಭಾರತ" ಎಂಬುದು ಈ ವರ್ಷದ ಧ್ಯೇಯವಾಕ್ಯವಾಗಿದೆ. ಇದೇ ವಿಷಯದ ಕುರಿತು ಆಡಳಿತ ಮಂಡಳಿಯ ಈ ಸಭೆಯಲ್ಲಿ ಚರ್ಚೆ ನಡೆಯಲಿದೆ.ಹತ್ತನೇ ಆಡಳಿತ ಮಂಡಳಿ ಸಭೆ ಅಭಿವೃದ್ಧಿ ಪಥದಲ್ಲಿ ದೇಶ ಎದುರಿಸುತ್ತಿರುವ ಸವಾಲುಗಳ ಕುರಿತು ಚರ್ಚಿಸಲು ಮತ್ತು ಭಾರತವನ್ನು ವಿಕಸಿತ ರಾಷ್ಟ್ರವನ್ನಾಗಿಸಲು ರಾಜ್ಯಗಳ ಪಾತ್ರದ ಬಗ್ಗೆ ಏಕತೆ ಮತ್ತು ಸಮನ್ವಯ ಸಾಧಿಸಲು ವೇದಿಕೆಯನ್ನು ಒದಗಿಸುತ್ತದೆ. ಉದ್ಯಮಶೀಲತೆಯನ್ನು ಉತ್ತೇಜಿಸುವುದು, ಕೌಶಲ್ಯಾಭಿವೃದ್ಧಿಯನ್ನು ಹೆಚ್ಚಿಸುವುದು ಮತ್ತು ದೇಶಾದ್ಯಾಂತ ಸುಸ್ಥಿರ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಕ್ರಮಗಳ ಕುರಿತು ಕೂಡ ಸಭೆಯಲ್ಲಿ ಚರ್ಚೆ ನಡೆಯಲಿದೆ. bಸಭೆಯಲ್ಲಿ ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳು, ಕೇಂದ್ರಾಡಳಿತ ಪ್ರದೇಶಗಳ ಲೆಫ್ಟಿನೆಂಟ್ ಗವರ್ನರ್‌ಗಳು, ಕೇಂದ್ರ ಸಚಿವರು, ನೀತಿ ಆಯೋಗದ ಉಪಾಧ್ಯಕ್ಷರು, ಸದಸ್ಯರು ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳು ಭಾಗವಹಿಸಲಿದ್ದಾರೆ.

*************

ಪ್ರಧಾನಿ ನರೇಂದ್ರ ಮೋದಿ ಅವರು ಇದೇ ೨೬ ಮತ್ತು ೨೭ ರಂದು ತಮ್ಮ ತವರು ರಾಜ್ಯ ಗುಜರಾತ್‌ಗೆ ಭೇಟಿ ನೀಡಲಿದ್ದಾರೆ. ಅಹಮದಾಬಾದ್‌ನಲ್ಲಿ ಭವ್ಯ ಸ್ವಾಗತವನ್ನು ಯೋಜಿಸಲಾಗಿದ್ದು, ಇದೇ ೨೬ರ ಸಂಜೆ ಬೃಹತ್ ರೋಡ್ ಶೋ ಅನ್ನು ನಿಗದಿಪಡಿಸಲಾಗಿದೆ. "ಆಪರೇಷನ್ ಸಿಂಧೂರ್ ನಂತರ ಪ್ರಧಾನಿ ಮೋದಿ ಗುಜರಾತ್‌ಗೆ ನೀಡುತ್ತಿರುವ ಮೊದಲ ಭೇಟಿ ಇದಾಗಿದೆ. ಜನರು ಅವರನ್ನು ಅದ್ದೂರಿಯಾಗಿ ಸ್ವಾಗತಿಸಲು ಸಿದ್ಧತೆ ನಡೆಸುತ್ತಿದ್ದಾರೆ" ಎಂದು ಅಹಮದಾಬಾದ್ ಮುನ್ಸಿಪಲ್ ಕಾರ್ಪೊರೇಷನ್‌ನ ಸ್ಥಾಯಿ ಸಮಿತಿಯ ಅಧ್ಯಕ್ಷ ತಿಳಿಸಿದ್ದಾರೆ. ಪ್ರಧಾನಿ ಮೋದಿ ಗುಜರಾತ್‌ನ ಮೂರು ಪ್ರಮುಖ ಜಿಲ್ಲೆಗಳಾದ ದಾಹೋಡ್, ಕಛ್ ಮತ್ತು ಗಾಂಧಿನಗರಕ್ಕೆ ಭೇಟಿ ನೀಡಲಿದ್ದಾರೆ. ಭೇಟಿಯ ವೇಳೆ ಪ್ರಧಾನಿ, ಸಾರ್ವಜನಿಕ-ಖಾಸಗಿ ಪಾಲುದಾರಿಕೆ - ಪಿಪಿಪಿ ಮಾದರಿಯಡಿಯಲ್ಲಿ ಹೈ-ಪವರ್ ಎಲೆಕ್ಟ್ರಿಕ್ ಲೋಕೋಮೋಟಿವ್‌ಗಳನ್ನು ತಯಾರಿಸುವ ಗುರಿಯನ್ನು ಹೊಂದಿರುವ ಹೆಗ್ಗುರುತು ರೈಲ್ವೆ ಯೋಜನೆಯ ಪ್ರಗತಿಯನ್ನು ಪರಿಶೀಲಿಸಲಿದ್ದಾರೆ. ಸೀಮೆನ್ಸ್ ಇಂಡಿಯಾ ತಂತ್ರಜ್ಞಾನ ಪಾಲುದಾರರಾಗಿ ಬೆಂಬಲಿತವಾದ ಈ ಕಾರ್ಖಾನೆಯು ಮುಂದಿನ ದಶಕದಲ್ಲಿ ೧,೨೦೦ ಅತ್ಯಾಧುನಿಕ ೯,೦೦೦ ಅಶ್ವಶಕ್ತಿಯ ವಿದ್ಯುತ್ ಸರಕು ಲೋಕೋಮೋಟಿವ್‌ಗಳನ್ನು ಉತ್ಪಾದಿಸಲು ನಿರ್ಧರಿಸಲಾಗಿದೆ.

*************

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರಕ್ಕೆ ೨೦೨೪-೨೫ರ ಹಣಕಾಸು ವರ್ಷಕ್ಕೆ ಭಾರತೀಯ ರಿಸರ್ವ್ ಬ್ಯಾಂಕ್ ನಿನ್ನೆ ತನ್ನ ಅತ್ಯಧಿಕ ಲಾಭಾಂಶವಾದ ೨.೬೯ ಲಕ್ಷ ಕೋಟಿ ರೂಪಾಯಿಗಳ ಲಾಭಾಂಶವನ್ನು ಅನುಮೋದಿಸಿದೆ. ಲಾಭಾಂಶ ಪಾವತಿಯು ಹಿಂದಿನ ವರ್ಷದ ೨.೧ ಲಕ್ಷ ಕೋಟಿ ರೂಪಾಯಿಗಳಿಗಿಂತ ಶೇಕಡ ೨೭.೪ರಷ್ಟು ಹೆಚ್ಚಾಗಿದೆ. ಈ ದಾಖಲೆಯ ಲಾಭಾಂಶವು ಹಣಕಾಸಿನ ಕೊರತೆಯನ್ನು ನಿಯಂತ್ರಣದಲ್ಲಿಡಲು ಸಹಾಯ ಮಾಡುತ್ತದೆ ಮತ್ತು ೨೦೨೫-೨೬ರಲ್ಲಿ ಬಡವರ ಬೆಳವಣಿಗೆಗೆ ಮತ್ತು ಸಾಮಾಜಿಕ ಕಲ್ಯಾಣ ಯೋಜನೆಗಳನ್ನು ಉತ್ತೇಜಿಸಲು ಮೂಲಸೌಕರ್ಯ ಯೋಜನೆಗಳ ಮೇಲಿನ ವೆಚ್ಚವನ್ನು ಹಣಕಾಸು ಸಚಿವಾಲಯ ಮುಂದುವರಿಸಲು ಅನುವು ಮಾಡಿಕೊಡುತ್ತದೆ. ನಿನ್ನೆ ನಡೆದ ಕೇಂದ್ರ ಮಂಡಳಿಯ ಸಭೆಯಲ್ಲಿ ಆರ್‌ಬಿಐ ತನ್ನ ಆಕಸ್ಮಿಕ ಅಪಾಯ ಬಫರ್ - ಸಿಆರ್‌ಬಿ ಅನ್ನು ಶೇಕಡ ೬.೫ರಿಂದ ಶೇಕಡ ೭.೫ಕ್ಕೆ ಹೆಚ್ಚಿಸಿದೆ.

*************

**ITBP, BSF, CRPF, CISF** ಮತ್ತು **SSB** ಸೇರಿದಂತೆ ಎಲ್ಲಾ ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳಲ್ಲಿ ಸಿಎಪಿಎಫ್ ಆರು ತಿಂಗಳೊಳಗೆ ಕೇಡರ್ ಪರಿಶೀಲನೆ ನಡೆಸಬೇಕೆಂದು ಸುಪ್ರೀಂಕೋರ್ಟ್ ನಿರ್ದೇಶಿಸಿದೆ. ಪರಿಶೀಲನೆಯನ್ನು ಮೂಲತಃ ೨೦೨೧ಕ್ಕೆ ನಿಗದಿಪಡಿಸಲಾಗಿತ್ತು ಆದರೆ ವಿಳಂಬವಾಗಿದೆ. ನ್ಯಾಯಮೂರ್ತಿಗಳಾದ ಅಭಯ್ ಎಸ್. ಓಕಾ ಮತ್ತು ಉಜ್ಜಲ್ ಭುಯಾನ್ ಅವರ ಪೀಠವು ಗೃಹ ವ್ಯವಹಾರಗಳ ಸಚಿವಾಲಯದಿಂದ ಕೇಡರ್ ಪರಿಶೀಲನೆ ಮತ್ತು ಅಸ್ತಿತ್ವದಲ್ಲಿರುವ ಸೇವಾ ನಿಯಮಗಳು ಮತ್ತು ನೇಮಕಾತಿ ನಿಯಮಗಳ ಪರಿಶೀಲನೆಗೆ ಸಂಬಂಧಿಸಿದಂತೆ ಕ್ರಮ ಕೈಗೊಂಡ ವರದಿಯನ್ನು ಸ್ವೀಕರಿಸಿದ ಮೂರು ತಿಂಗಳೊಳಗೆ ಸೂಕ್ತ ನಿರ್ಧಾರ ತೆಗೆದುಕೊಳ್ಳುವಂತೆ ಸಿಬ್ಬಂದಿ ಮತ್ತು ತರಬೇತಿ

ಇಲಾಖೆಗೆ ನಿರ್ದೇಶಿಸಿತು. ಐಪಿಎಸ್ ನಿಯೋಜನೆಯನ್ನು ತೆಗೆದುಹಾಕಲು ಕ್ರಿಯಾತ್ಮಕವಲ್ಲದ ಹಣಕಾಸು ಉನ್ನತೀಕರಣ, ಕೇಡರ್ ಪರಿಶೀಲನೆ ಮತ್ತು ಪುನರ್ರಚನೆ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿಯನ್ನು ಕೋರಿ ಸಲ್ಲಿಸಲಾದ ಅರ್ಜಿಗಳ ಮೇಲೆ ನ್ಯಾಯಾಲಯದ ನಿರ್ದೇಶನ ಬಂದಿದೆ. ದೇಶದ ಗಡಿಗಳಲ್ಲಿ ಭದ್ರತೆಯನ್ನು ಕಾಪಾಡಿಕೊಳ್ಳಲು ಮತ್ತು ಆಂತರಿಕ ಭದ್ರತಾ ಕರ್ತವ್ಯಗಳನ್ನು ನಿರ್ವಹಿಸಲು ಸಿಎಪಿಎಫ್ ಗಳ ಪಾತ್ರ ನಿರ್ಣಾಯಕವಾಗಿದೆ ಎಂದು ನ್ಯಾಯಾಲಯ ತಿಳಿಸಿದೆ. ರಾಜ್ಯ ಸರ್ಕಾರಗಳು ಮತ್ತು ರಾಜ್ಯ ಪೊಲೀಸ್ ಪಡೆಗಳೊಂದಿಗೆ ಸಮನ್ವಯ ಸಾಧಿಸುವುದು ಸೇರಿದಂತೆ ಸಿಎಪಿಎಫ್ ಗಳ ನಿಯೋಜನೆಗೆ ಸಂಬಂಧಿಸಿದ ವಿವಿಧ ಸಮಸ್ಯೆಗಳಿವೆ ಎಂದು ತಿಳಿಸಲಾಗಿದೆ.

*************

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಇಂದು ಪೂಂಚ್‌ಗೆ ಭೇಟಿ ನೀಡಲಿದ್ದು, ಪಹಲ್ಗಾಮ್ ದಾಳಿಯಲ್ಲಿ ಸಾವನ್ನಪ್ಪಿದವರ ಕುಟುಂಬಗಳನ್ನು ಭೇಟಿ ಮಾಡಲಿದ್ದಾರೆ. ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿ ಮತ್ತು ಜಮ್ಮು ಮತ್ತು ಕಾಶ್ಮೀರ ವ್ಯವಹಾರಗಳ ಉಸ್ತುವಾರಿ ಡಾ. ನಾಸೀರ್ ಹುಸೇನ್ ಸೇರಿದಂತೆ ಪಕ್ಷದ ಹಿರಿಯ ನಾಯಕರು ಈ ಭೇಟಿಯಲ್ಲಿ ಅವರೊಂದಿಗೆ ಇರಲಿದ್ದಾರೆ.

*************

ಭಾರತವು ಪಾಕಿಸ್ತಾನ ಪ್ರಾಯೋಜಿತ ಭಯೋತ್ಪಾದಕ ದಾಳಿಗಳನ್ನು ಗಡಿಯುದ್ದಕ್ಕೂ ದಶಕಗಳಿಂದ ಅನುಭವಿಸಿದೆ ಎಂದು ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಭಾರತ ಪಾಕಿಸ್ತಾನವನ್ನು ತೀವ್ರವಾಗಿ ಟೀಕಿಸಿದೆ. ಸಶಸ್ತ್ರ ಸಂಘರ್ಷಗಳ ಸಮಯದಲ್ಲಿ ನಾಗರಿಕರನ್ನು ರಕ್ಷಿಸುವ ಕುರಿತು ಮುಕ್ತ ಚರ್ಚೆಯ ಸಂದರ್ಭದಲ್ಲಿ ವಿಶ್ವಸಂಸ್ಥೆಯಲ್ಲಿ ಭಾರತದ ಖಾಯಂ ಪ್ರತಿನಿಧಿ ರಾಯಭಾರಿ ಪರ್ವತನೇನಿ ಹರೀಶ್ ಈ ಹೇಳಿಕೆ ನೀಡಿದ್ದಾರೆ. ಭಯೋತ್ಪಾದನೆಯ ಉದ್ದೇಶವನ್ನು ಮುನ್ನಡೆಸಲು ಪಾಕಿಸ್ತಾನ ಪದೇ ಪದೇ ನಾಗರಿಕ ರಕ್ಷಣೆಯನ್ನು ಬಳಸುತ್ತಿದೆ ಎಂದು ಅವರು ಹೇಳಿದರು. ಆಪರೇಷನ್ ಸಿಂಧೂರ್‌ನಲ್ಲಿ ಹತ್ಯೆಗೀಡಾದ  ಭಯೋತ್ಪಾದಕರ ಅಂತ್ಯಕ್ರಿಯೆಯಲ್ಲಿ ಹಿರಿಯ ಸರ್ಕಾರಿ ಅಧಿಕಾರಿಗಳು, ಪೊಲೀಸ್ ಮತ್ತು ಮಿಲಿಟರಿ ಅಧಿಕಾರಿಗಳು ಗೌರವ ಸಲ್ಲಿಸುವುದನ್ನು ಜಗತ್ತು ಇತ್ತೀಚೆಗೆ ನೋಡಿದೆ ಎಂದು ಅವರು ಹೇಳಿದ್ದಾರೆ. ಭಯೋತ್ಪಾದಕರು ಮತ್ತು ನಾಗರಿಕರ ನಡುವೆ ಯಾವುದೇ ವ್ಯತ್ಯಾಸವನ್ನು ತೋರಿಸದ ರಾಷ್ಟ್ರವು ನಾಗರಿಕರನ್ನು ರಕ್ಷಿಸುವ ಬಗ್ಗೆ ಮಾತನಾಡಲು ಯಾವುದೇ ಅರ್ಹತೆಯನ್ನು ಹೊಂದಿಲ್ಲ ಎಂದು ಅವರು ಹೇಳಿದರು.

************

ಆಪರೇಷನ್ ಸಿಂಧೂರ್ ಕುರಿತು ಭಾರತದ ರಾಜತಾಂತ್ರಿಕ ಸಂಪರ್ಕದ ಭಾಗವಾಗಿ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ನಾಲ್ಕು ಬಹು-ಪಕ್ಷ ನಿಯೋಗಗಳ ಸದಸ್ಯರಿಗೆ ವಿವರಿಸಿದರು. ಕಾಂಗ್ರೆಸ್ ನಾಯಕ ಶಶಿ ತರೂರ್, ಬಿಜೆಪಿ ನಾಯಕ ರವಿಶಂಕರ್ ಪ್ರಸಾದ್, ಎನ್‌ಸಿಪಿ-ಎಸ್‌ಪಿ ನಾಯಕಿ ಸುಪ್ರಿಯಾ

ಸುಳೆ ಮತ್ತು ಬಿಜೆಪಿ ನಾಯಕ ಬೈಜಯಂತ್ ಪಾಂಡ ನೇತೃತ್ವದ ನಿಯೋಗಗಳಿಗೆ ಮಿಶ್ರಿ ವಿವರಿಸಿದರು.ನಿನ್ನೆ ನಡೆದ ಸಮಾಲೋಚನೆ ನಂತರ, ಕಾಂಗ್ರೆಸ್ ಸಂಸದ ಶಶಿ ತರೂರ್, ಭಾರತವು ೧೯೮೯ ರಿಂದ ಗಡಿಯಾಚೆಯಿಂದ ಎದುರಿಸುತ್ತಿರುವ ಭಯಾನಕ ಭಯೋತ್ಪಾದನೆಯ ಬಗ್ಗೆ ಎಲ್ಲಾ ಬಾಹ್ಯ ಸಂವಾದಕರಿಗೆ ತಿಳಿಸಲಿದೆ ಎಂದು ಹೇಳಿದರು. ಭಾರತದೊಂದಿಗೆ ನಿಖರವಾಗಿ ಏನು ನಡೆಯುತ್ತಿದೆ ಮತ್ತು ಭವಿಷ್ಯದಲ್ಲಿ ಈ ಭಯೋತ್ಪಾದಕ ದಾಳಿಗಳನ್ನು ಹೇಗೆ ಎದುರಿಸಬೇಕೆಂದು ನಿಯೋಗವು ವಿವರಿಸುತ್ತದೆ ಎಂದು ಅವರು ಹೇಳಿದರು.ಬಿಜೆಪಿ ನಾಯಕ ಬೈಜಯಂತ್ ಪಾಂಡಾ ಸಮಾಲೋಚನೆ ಅನ್ನು ಬಹಳ ಫಲಪ್ರದ ಎಂದು ಬಣ್ಣಿಸಿದರು. ಭಾರತದಲ್ಲಿ ಕಂಡುಬರುವ ಏಕತೆ ಬಹಳ ಮುಖ್ಯ ಮತ್ತು ದೇಶದ ಸಂದೇಶವನ್ನು ಜಗತ್ತಿಗೆ ಕೊಂಡೊಯ್ಯಲು ತಿಳುವಳಿಕೆ ಮತ್ತು ಬದ್ಧತೆ ಇದೆ ಎಂದು ಅವರು ಹೇಳಿದರು. ಎನ್‌ಸಿಪಿ ಸಂಸದೆ ಸುಪ್ರಿಯಾ ಸುಳೆ ಅವರು ಭಾರತ ಭಯೋತ್ಪಾದನೆಯ ವಿರುದ್ಧ ಮತ್ತು ಅದರ ಬಗ್ಗೆ ಶೂನ್ಯ ಸಹಿಷ್ಣುತೆಯನ್ನು ಹೊಂದಿದೆ.

*************

ಶಿವಸೇನಾ ಸಂಸದ ಶ್ರೀಕಾಂತ್ ಏಕನಾಥ್ ಶಿಂಧೆ ನೇತೃತ್ವದ ಭಾರತದ ಉನ್ನತ ಮಟ್ಟದ ಸರ್ವಪಕ್ಷ ನಿಯೋಗವು ನಿನ್ನೆ ಅಬುಧಾಬಿಯ ಶೇಖ್ ಜಾಯೆದ್ ಗ್ರ್ಯಾಂಡ್ ಮಸೀದಿ, ಬಿಎಪಿಎಸ್ ಹಿಂದೂ ದೇವಾಲಯ ಮತ್ತು ಗುರುನಾನಕ್ ದರ್ಬಾರ್ ಗುರುದ್ವಾರದಲ್ಲಿ ಪೂಜೆ ಸಲ್ಲಿಸಿತು.

*************

ಪೋಲೆಂಡ್‌ನ ಚೋರ್ಜೋವ್‌ನಲ್ಲಿ ನಡೆದ ೨೦೨೫ರ ಜಾವೆಲಿನ್ ಎಸೆತದಲ್ಲಿ ನೀರಜ್ ಚೋಪ್ರಾ ೮೪.೧೪ ಮೀಟರ್ ದೂರ ಎಸೆದು ಬೆಳ್ಳಿ ಪದಕ ಗೆದ್ದಿದ್ದಾರೆ. ತಮ್ಮ ಆರನೇ ಮತ್ತು ಕೊನೆಯ ಪ್ರಯತ್ನದಲ್ಲಿ ೮೨.೧೪ ಮೀಟರ್ ದೂರ ಎಸೆದಿದ್ದಾರೆ. ಜರ್ಮನಿಯ ಜೂಲಿಯನ್ ವೆಬರ್ ೮೬.೧೨ ಮೀಟರ್ ದೂರ ಎಸೆದು ಚಿನ್ನ ಗೆದ್ದರೆ, ಗ್ರೆನಡಾದ ಆಂಡರ್ಸನ್ ಪೀಟರ್ಸ್ ೮೩.೨೪ ಮೀಟರ್ ದೂರ ಎಸೆದು ಮೂರನೇ ಸ್ಥಾನ ಪಡೆದರು.

*************

ಲಖನೌದ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ತಂಡ, ರಾಯಲ್ ಚ್ಯಾಲೆಂಜರ್ಸ್ ಬೆಂಗಳೂರು ತಂಡವನ್ನು ೪೨ ರನ್‌ಗಳಿಂದ ಮಣಿಸಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಹೈದರಾಬಾದ್ ತಂಡ ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೨೩೧ ರನ್ ಗಳಿಸಿತು. ೨೩೨ ರನ್‌ಗಳ ಬೃಹತ್ ಗುರಿ ಬೆನ್ನತ್ತಿದ ಬೆಂಗಳೂರು ತಂಡ ೧೯.೫ ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು ೧೮೯ ರನ್ ಗಳಿಸಲಷ್ಟೇ ಶಕ್ಯವಾಯಿತು.

*************

ಮಲೇಷ್ಯಾ ಮಾಸ್ಟರ್ಸ್ ಬ್ಯಾಡ್ಮಿಂಟನ್ ಟೂರ್ನಿಯ ಪುರುಷರ ಸಿಂಗಲ್ಸ್ ವಿಭಾಗದ ಸೆಮಿಫೈನಲ್ ಪಂದ್ಯದಲ್ಲಿಂದು ಭಾರತದ ಶಟ್ಲರ್ ಕಿದಂಬಿ ಶ್ರೀಕಾಂತ್, ಜಪಾನ್‌ನ ಯುಶಿ ತನಕಾ ಅವರನ್ನು ಎದುರಿಸಲಿದ್ದಾರೆ. ಪಂದ್ಯ ಭಾರತಿಯ ಕಾಲಮಾನ ಬೆಳಿಗ್ಗೆ ೧೦.೧೫ ಕ್ಕೆ ಪ್ರಾರಂಭವಾಗಲಿದೆ.

*************